# All India Radio: Bangalore
# Regional Bulletin In Kannada

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 13.05.2026 / 6.40 p.m.

**************

ಮುಖ್ಯಾಂಶಗಳು

೧. ನೀಟ್ - ಯುಜಿ ಹೊಸ ಪರೀಕ್ಷಾ ವೇಳಾಪಟ್ಟಿ ಶೀಘ್ರವೇ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ

೨. ಡೀಪ್ ಟೆಕ್ ಕೃತಕ ಬುದ್ಧಿಮತ್ತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಪಾಲುದಾರಿಕೆ - ಸಚಿವ ಪ್ರಿಯಾಂಕ್ ಖರ್ಗೆ ಜೊತೆ ಚಿಲಿ ನಿಯೋಗ ಮಾತುಕತೆ

೩. ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಗೆ ಚುನಾವಣಾ ಆಯೋಗ ಆದೇಶ; ಸಾರ್ವಜನಿಕರು ಸಹಕರಿಸುವಂತೆ ಮನವಿ

೪. ರಾಜ್ಯದಲ್ಲಿ ಔಷಧಿಯ ಗುಣಮಟ್ಟ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯಿಂದ ಕಣ್ಗಾವಲು ಪೋರ್ಟಲ್

೫. ತೆರಿಗೆದಾರರ ಜಾಗೃತಿ ಕಾರ್ಯಕ್ರಮಕ್ಕೆ ಟೆನಿಸ್ ಪಟು ರೋಹನ್ ಬೋಪಣ್ಣ ಚಾಲನೆ

---

ದೇಶಾದ್ಯಂತ ೨೨ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಬರೆದಿದ್ದ 'ನೀಟ್-ಯುಜಿ ೨೦೨೬' ಪರೀಕ್ಷೆಯನ್ನು ರದ್ದುಗೊಳಿಸಿರುವ ಕೇಂದ್ರ ಸರ್ಕಾರದ ನಿರ್ಧಾರವು ಆಡಳಿತಾತ್ಮಕ ವೈಫಲ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ರಾಜ್ಯದ ಒಂದು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಸೇರಿದಂತೆ ದೇಶದ ೨೨ ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ತಿಂಗಳುಗಟ್ಟಲೆ ಶ್ರಮಪಟ್ಟು ಈ ಪರೀಕ್ಷೆ ಬರೆದಿದ್ದರು. ಪೋಷಕರು ತಮ್ಮ ಮಕ್ಕಳ ಭವಿಷ್ಯಕ್ಕಾಗಿ ತರಬೇತಿ, ಪ್ರಯಾಣ ಸೇರಿದಂತೆ ಸಾಕಷ್ಟು ಖರ್ಚುಗಳನ್ನು ಮಾಡಿದ್ದರು. ಆದರೆ ಕೇಂದ್ರದ ಒಂದು ನಿರ್ಧಾರ ಇಡೀ ವಿದ್ಯಾರ್ಥಿ ಸಮುದಾಯವನ್ನು ಅನಿಶ್ಚಿತತೆ ಮತ್ತು ಸಂಕಷ್ಟಕ್ಕೆ ತಳ್ಳಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕೂಡಲೇ ರಾಜೀನಾಮೆ ನೀಡಬೇಕು. ಈ ಬಗ್ಗೆ ಪಾರದರ್ಶಕ ಹಾಗೂ ಕಾಲಮಿತಿಯ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಹೊಸ ಪರೀಕ್ಷಾ ವೇಳಾಪಟ್ಟಿಯ ಬಗ್ಗೆ ಕೂಡಲೇ ಸ್ಪಷ್ಟನೆ ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

---

ಪ್ರವರ್ಧಮಾನಕ್ಕೆ ಬರುತ್ತಿರುವ ತಂತ್ರಜ್ಞಾನ, ಶುದ್ಧ ಇಂಧನ ಮತ್ತು ನವೋದ್ಯಮ ಕ್ಷೇತ್ರಗಳಲ್ಲಿ ಕರ್ನಾಟಕದ ಜೊತೆಗೆ ವಾಣಿಜ್ಯ ಬಾಂಧವ್ಯ ಬಲಪಡಿಸಲು ಚಿಲಿ ದೇಶ ಒಲವು ವ್ಯಕ್ತಪಡಿಸಿದೆ.

ವಿದೇಶಾಂಗ ಸಚಿವ ಫ್ರಾನ್ಸಿಸ್ಕೋ ಪೆರೇಜ್ ಮೆಕೆನ್ನಾ ನೇತೃತ್ವದ ಚಿಲಿ ಗಣರಾಜ್ಯದ ಉನ್ನತ ಮಟ್ಟದ ನಿಯೋಗ ವಿಧಾನಸೌಧದಲ್ಲಿಂದು ಐಟಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿತು.

ಬಳಿಕ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಡೀಪ್ ಟೆಕ್ ಕೃತಕ ಬುದ್ಧಿಮತ್ತೆ, ಜೈವಿಕ ತಂತ್ರಜ್ಞಾನ, ವೈಮಾಂತರಿಕ್ಷ ಮತ್ತು ಅತ್ಯಾಧುನಿಕ ಸಂಶೋಧನೆಗೆ ಜಾಗತಿಕ ಕೇಂದ್ರವಾಗಿ ರಾಜ್ಯವು ವಿಶ್ವದ ಗಮನ ಸೆಳೆಯುತ್ತಿದೆ ಎಂದು ತಿಳಿಸಿದರು. ಲ್ಯಾಟಿನ್ ಅಮೆರಿಕಗೆ ಪ್ರವೇಶದ್ವಾರವಾಗಿರುವ ಚಿಲಿಯು ರಾಜ್ಯದ ನವೋದ್ಯಮಗಳು ಜಾಗತಿಕವಾಗಿ ತಮ್ಮ ವಹಿವಾಟು ವಿಸ್ತರಿಸಲು ಮಹತ್ವದ ಅವಕಾಶ ಒದಗಿಸಲಿದೆ ಎಂದು ಸ್ಪಷ್ಟಪಡಿಸಿದರು.

ಚಿಲಿ ವಿದೇಶಾಂಗ ಸಚಿವ ಮೆಕೆನ್ನಾ ಮಾತನಾಡಿ, ಕರ್ನಾಟಕದ ಜೊತೆ ಪಾಲುದಾರಿಕೆ ಹೊಂದಲು ಚಿಲಿ ಉತ್ಸುಕವಾಗಿದೆ ಎಂದು ತಿಳಿಸಿದರು.

---

ಕೇಂದ್ರ ಚುನಾವಣಾ ಆಯೋಗವು ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ - ಎಸ್‌ಐಆರ್ ಹಂತ-೩ಅನ್ನು ಇಂದು ಘೋಷಿಸಿದೆ.

೧೭ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಹಂತ ಹಂತವಾಗಿ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಾಗುವುದು ಎಂದು ತಿಳಿಸಿದೆ. ಈ ಹಂತದಲ್ಲಿ ಕರ್ನಾಟಕದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಯಲಿದೆ.

ಎಲ್ಲಾ ಮತದಾರರು ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಯ ಮೂರನೇ ಹಂತದಲ್ಲಿ ಉತ್ಸಾಹದಿಂದ ಭಾಗವಹಿಸುವಂತೆ ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ಜೂನ್ ೧೦ ರಿಂದ ೧೯ರ ವರೆಗೆ ಅಧಿಕಾರಿಗಳಿಗೆ ಅಗತ್ಯ ತರಬೇತಿ ನಡೆಯಲಿದೆ. ಜೂನ್ ೩೦ ರಿಂದ ಜುಲೈ ೨೯ರ ವರೆಗೆ ಮನೆ ಮನೆಗೆ ತೆರಳಿ, ಬೂತ್ ಮಟ್ಟದ ಅಧಿಕಾರಿಗಳು ಪರಿಶೀಲನೆ ನಡೆಸಲಿದ್ದಾರೆ. ಆಗಸ್ಟ್ ೫ರಂದು ಮತದಾರರ ಕರಡು ಪಟ್ಟಿ ಪ್ರಕಟಣೆಯಾಗಲಿದೆ.

ಆಗಸ್ಟ್ ೫ ರಿಂದ ಸೆಪ್ಟೆಂಬರ್ ೪ರ ವರೆಗೆ ಸಾರ್ವಜನಿಕರು ಆಕ್ಷೇಪಣೆಗಳನ್ನು ಸಲ್ಲಿಸಲು ಮತ್ತು ಹೊಸದಾಗಿ ಹೆಸರು ಸೇರಿಸಲು ಕಾಲಾವಕಾಶ ನೀಡಲಾಗಿದೆ. ಅಕ್ಟೋಬರ್ ೭ರಂದು ಕರ್ನಾಟಕದ ಅಂತಿಮ ಪರಿಷ್ಕೃತ ಮತದಾರರ ಪಟ್ಟಿ ಅಧಿಕೃತವಾಗಿ ಬಿಡುಗಡೆಯಾಗಲಿದೆ.

ದೇಶಾದ್ಯಂತ ನವೀಕರಿಸಿದ ಮತ್ತು ನಿಖರವಾದ ಮತದಾರರ ಪಟ್ಟಿ ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

---

ಎನ್‌ಎಸ್‌ಕ್ಯೂ ಔಷಧಗಳನ್ನು ಮಾರುಕಟ್ಟೆಯಲ್ಲಿ ನಿಖರವಾಗಿ ಪತ್ತೆಹಚ್ಚಲು ಮತ್ತು ಎನ್‌ಡಿಪಿಎಸ್ ಔಷಧಗಳ ದುರುಪಯೋಗ ತಡೆಯಲು ನೂತನ ಕಣ್ಗಾವಲು ವ್ಯವಸ್ಥೆಯಾಗಿರುವ ಮಾನಿಟರಿಂಗ್ ಪೋರ್ಟಲ್‌ಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಬೆಂಗಳೂರಿನಲ್ಲಿಂದು ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಔಷಧಿಗಳ ಗುಣಮಟ್ಟ ಉತ್ತಮ ದರ್ಜೆಯಲ್ಲಿ ಇಲ್ಲದಾಗ ಈ ಪೋರ್ಟಲ್ ಮೂಲಕ ಮಾಹಿತಿ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಪೋರ್ಟಲ್‌ನಲ್ಲಿ ಔಷಧೀಯ ಗುಣಮಟ್ಟ ಬಹಿರಂಗಪಡಿಸಿದ ಕೂಡಲೇ ಔಷಧ ಸರಬರಾಜುದಾರರಿಗೆ ಮಾಹಿತಿ ರವಾನೆಯಾಗಲಿದೆ. ಈ ಮೂಲಕ ರಾಜ್ಯದಲ್ಲಿ ಔಷಧೀಯ ಗುಣಮಟ್ಟ ಕಾಪಾಡಬಹುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

---

ಮೈಸೂರು ನಗರದ ಅಭಿವೃದ್ಧಿ ಕಾಮಗಾರಿಗಳು ನಿಗದಿತ ಅವಧಿಯಲ್ಲಿ ಪೂರ್ಣಗೊಳ್ಳುವ ಜೊತೆಗೆ ಗುಣಮಟ್ಟದಿಂದ ಕೂಡಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಮೈಸೂರು ನಗರ ಪ್ರದಕ್ಷಿಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ೫೦ ಕಿಲೋಮೀಟರ್ ರಸ್ತೆಯಲ್ಲಿ ವೈಟ್ ಟಾಪಿಂಗ್ ಮಾಡಲಾಗುತ್ತಿದ್ದು, ಇಂತಹ ರಸ್ತೆಗಳು ಸುಮಾರು ೩೦ ವರ್ಷಗಳ ಕಾಲ ಸಂಚಾರ ಯೋಗ್ಯವಾಗಿರಲಿದೆ ಎಂದು ಹೇಳಿದ್ದಾರೆ.

ಈ ರಸ್ತೆ ಕಾಮಗಾರಿಯಿಂದ ನಗರದಲ್ಲಿ ಸುಗಮ ಸಂಚಾರ ಹಾಗೂ ವಾಹನ ದಟ್ಟಣೆ ಸಮಸ್ಯೆ ಪರಿಹಾರವಾಗಲಿದೆ ಎಂದು ತಿಳಿಸಿದ್ದಾರೆ.

ಮಹಾರಾಣಿ ಕಾಲೇಜಿನ ಒಂದು ಸಾವಿರದ ೪೦೦ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೊಸ ವಿದ್ಯಾರ್ಥಿ ನಿಲಯವನ್ನು ನಿರ್ಮಿಸಲಾಗುತ್ತಿದೆ ಎಂದು ಹೇಳಿದ್ದಾರೆ.

---

ಖ್ಯಾತ ಟೆನಿಸ್ ಪಟು ರೋಹನ್ ಬೋಪಣ್ಣ ಬೆಂಗಳೂರಿನಲ್ಲಿಂದು ವರಮಾನ ತೆರಿಗೆ ಇಲಾಖೆಯ ಹೊಸ ಕಾಯ್ದೆ ಕುರಿತ ತೆರಿಗೆದಾರರ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ತೆರಿಗೆದಾರರು ಸುಲಭವಾಗಿ ಅರ್ಥಮಾಡಿಕೊಳ್ಳಬಲ್ಲ ೨೦೨೫ರ ಹೊಸ ಕಾಯ್ದೆ ತೆರಿಗೆ ಉತ್ತಮ ಉಪಕ್ರಮವಾಗಿದೆ. ಇದನ್ನು ಅರ್ಥಮಾಡಿಕೊಳ್ಳಲು ತೆರಿಗೆ ಇಲಾಖೆ ಪರಿಚಯಿಸಿರುವ ಕರ್‌ಸಾಥಿ ಎಐ ಆಧಾರಿತ ಸಂವಹನ ಅಂತರ್ಜಾಲ ವ್ಯವಸ್ಥೆ ನಿಜಕ್ಕೂ ಕಾಯ್ದೆಗೆ ಸಂಬಂಧಿಸಿದ ವಿವಿಧ ಪರಿಚ್ಛೇದಗಳನ್ನು ಅರ್ಥಮಾಡಿಕೊಳ್ಳಲು ಅನುಕೂಲವಾಗಲಿದೆ ಎಂದರು.

ಧ್ವನಿ: ರೋಹನ್ ಬೋಪಣ್ಣ

ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಕರ್ನಾಟಕ ಮತ್ತು ಗೋವಾ ಪ್ರದೇಶದ ತೆರಿಗೆ ಇಲಾಖೆ ಪ್ರಧಾನ ಮುಖ್ಯ ಆಯುಕ್ತರಾದ ವಿದೀಶಾ ಕಾಲ್ರಾ, ೧೯೬೧ರ ಹಳೆ ಕಾಯ್ದೆಯಲ್ಲಿ ೫.೨೧ ಲಕ್ಷ ಪದಗಳನ್ನು ಬಳಸಲಾಗಿದ್ದರೆ, ೨೦೨೫ರ ಕಾಯ್ದೆಯಲ್ಲಿ ಇದನ್ನು ೨.೬೦ ಪದಗಳಿಗೆ ಇಳಿಸಲಾಗಿದೆ. ಪರಿಚ್ಛೇದಗಳ ಸಂಖ್ಯೆಯನ್ನು ೮೧೯ ರಿಂದ ೫೩೬ಕ್ಕೆ, ಪಠ್ಯಗಳ ಸಂಖ್ಯೆಯನ್ನು ೪೭ ರಿಂದ ೨೩ಕ್ಕೆ ಇಳಿಸಲಾಗಿದೆ.

ಅರ್ಜಿ ನಮೂನೆಗಳ ಸಂಖ್ಯೆಗಳನ್ನು ೩೯೯ ರಿಂದ ೧೯೦ಕ್ಕೆ ಹಾಗೂ ನಿಯಮಗಳ ಸಂಖ್ಯೆಯನ್ನು ೫೧೧ ರಿಂದ ೩೩೩ಕ್ಕೆ ಇಳಿಸಲಾಗಿದೆ. ಇದರಿಂದ ತೆರಿಗೆದಾರರು ತೆರಿಗೆ ಕಾನೂನನ್ನು ಸುಲಭವಾಗಿ ಸರಳ ಭಾಷೆಯಲ್ಲಿ ಅರ್ಥೈಸಿಕೊಳ್ಳಲು ಅನುಕೂಲವಾಗಲಿದೆ. ಕರ್‌ಸಾಥಿ ಆಪ್ ಬಳಕೆಯಿಂದ ತೆರಿಗೆದಾರರ ಮೊಬೈಲ್‌ನಲ್ಲಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

———————————

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ನೂತನವಾಗಿ ಆಯ್ಕೆಯಾದ ಶಾಸಕರು ಇಂದು ಪ್ರಮಾಣವಚನ ಸ್ವೀಕರಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಬಾಗಲಕೋಟೆ ಕ್ಷೇತ್ರದ ಶಾಸಕ ಉಮೇಶ್ ಮೇಟಿ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ಅವರಿಗೆ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಪ್ರಮಾಣವಚನ ಬೋಧಿಸಿದರು.

__________ಮುಕ್ತಾಯ_________